ದಿನಾಂಕಃ **10.07.2025** ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

ಪಾಟೀ ಸವಾಲುಃ **8** ನೇ ಪ್ರತಿವಾದಿ ಪರ ಶ್ರೀ ಜಿ.ಎಸ್.ಆರ್. ವಕೀಲರಿಂದಃ

ನಾನು ಮತ್ತು 1 ನೇ ವಾದಿ 10 ನೇ ತರಗತಿಯವರೆಗೆ ಓದಿರುತ್ತೇವೆ. ನನ್ನ ಮತ್ತು ಮತ್ತು 1 ನೇ ವಾದಿಯ ಪಾಲನೆ ಪೋಷಣೆಯನ್ನು ನನ್ನ ತಂದೆ-ತಾಯಿ ಮಾಡಿರುತ್ತಾರೆ. 1 ನೇ ವಾದಿಯ ಮದುವೆಯನ್ನು ನನ್ನ ತಂದೆ-ತಾಯಿ ಮಾಡಿರುತ್ತಾರೆ. 1 ನೇ ವಾದಿಯ ಮದುವೆಯಾಗಿ ಸುಮಾರು 6 ವರ್ಷಗಳಾಗಿರುತ್ತದೆ. ನಾವು, ನನ್ನ ತಂದೆ ಮತ್ತು ನನ್ನ ತಂದೆಯ ಅಣ್ಣ-ತಮ್ಮಂದಿರೆಲ್ಲರೂ ಇಂದಿಗೂ ಒಟ್ಟು ಕುಟುಂಬದಲ್ಲಿ ವಾಸವಾಗಿರುವ ಬಗ್ಗೆ ದಾಖಲೆಗಳು ಇರುತ್ತವೆ. ನಮ್ಮ ಕುಟುಂಬಕ್ಕೆ ಪಡಿತರ ಚೀಟಿಯನ್ನು ನೀಡಿರುತ್ತಾರೆ ಅದನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಬಹುದು. ನನ್ನ ತಂದೆ ಮತ್ತು ನನ್ನ ತಂದೆಯ ಅಣ್ಣ-ತಮ್ಮಂದಿರೆಲ್ಲರೂ ನಮ್ಮ ಗ್ರಾಮದಲ್ಲಿ ನಾರಾಯಣಪ್ಪನವರ ಮನೆಯಲ್ಲಿ ಬಾಡಿಗೆಗೆ ವಾಸವಾಗಿರುತ್ತಾರೆ.

**2.** ನಮ್ಮ ತಾತನ ಕಾಲದಲ್ಲಿ ನಮ್ಮ ಕುಟುಂಬಕ್ಕೆ ಊರಿನಲ್ಲಿ ಮನೆ ಇತ್ತು ಅದನ್ನು 8 ನೇ ಪ್ರತಿವಾದಿಯವರಿಗೆ ಮಾರಾಟ ಮಾಡಿರುತ್ತಾರೆ. ನಮ್ಮ ಕುಟುಂಬಕ್ಕೆ ಸೇರಿದ ಮನೆಯನ್ನು 8 ನೇ ಪ್ರತಿವಾದಿಯವರಿಗೆ ಮಾರಾಟ ಮಾಡಿರುತ್ತಾರೆ ಎಂಬುದಕ್ಕೆ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿರುತ್ತೇನೆ. ಯಾವ ದಾಖಲೆಯನ್ನು ಹಾಜರು ಪಡಿಸಿರುತ್ತೇನೆ ಎಂದು ಹೇಳಲು ಆಗುವುದಿಲ್ಲ. ಈ ದಾವೆಯನ್ನು ಒಟ್ಟು 3 ಆಸ್ತಿಗಳಿಗೆ ಸಂಬಂಧಿಸಿದಂತೆ ಹೂಡಿರುತ್ತೇನೆ. ದಾವಾ ಸ್ವತ್ತನ್ನು ಹೊರತು ಪಡಿಸಿ ನಿಮ್ಮ ಕುಟುಂಬಕ್ಕೆ ಇದ್ದ ಮನೆಯನ್ನು ಈ ದಾವೆಯಲ್ಲಿ ಸೇರಿಸಿರುತ್ತೀರಾ ಎಂದು ಪ್ರಶ್ನಿಸಿದ್ದಕ್ಕೆ ಸಾಕ್ಷಿಯು 8 ನೇ ಪ್ರತಿವಾದಿಗೆ ಮಾರಾಟ ಮಾಡಿದ ಜಮೀನಿನಲ್ಲಿಯೇ ಮನೆ ಇತ್ತು ಎಂದು ಉತ್ತರಿಸಿರುತ್ತಾರೆ. ಸರ್ವೆ ನಂ. 53/5 ರಲ್ಲಿ ಮನೆ ಇತ್ತು. ಸರ್ವೆ ನಂ. 53/5 ನ್ನು 8 ನೇ ಪ್ರತಿವಾದಿಗೆ ಮಾರಾಟ ಮಾಡಿರುತ್ತಾರೆ. ಸದರಿ

ಸ್ವತ್ತನ್ನು ನನ್ನ ತಂದೆ ಮತ್ತು ಚಿಕ್ಕಪ್ಪಂದಿರು 8 ನೇ ಪ್ರತಿವಾದಿಗೆ ಮಾರಾಟ ಮಾಡಿರುತ್ತಾರೆ. ಕ್ರಯ ಪತ್ರದಲ್ಲಿ ಸದರಿ ಜಮೀನಿನಲ್ಲಿ ಮನೆಯೂ ಸಹ ಇತ್ತು ಎಂದು ನಮೂದು ಮಾಡಿರುತ್ತಾರೆ ಕ್ರಯ ಪತ್ರದ ದಿನಾಂಕ ನನಗೆ ಗೊತ್ತಿರುವುದಿಲ್ಲ.

**3.** ದಾವಾ 2 ನೇ ಆಸ್ತಿಯನ್ನು ನನ್ನ ತಂದೆ ಮತ್ತು ಚಿಕ್ಕಪ್ಪಂದಿರು 8 ನೇ ಪ್ರತಿವಾದಿಗೆ ಮಾರಾಟ ಮಾಡಿರುತ್ತಾರೆಂದು ನಮ್ಮ ವಕೀಲರಿಗೆ ಮಾಹಿತಿ ನೀಡಿ ವಾದ ಪತ್ರದಲ್ಲಿ ನಮೂದು ಮಾಡಿಸಿರುತ್ತೇನೆ. ನನ್ನ ಹೇಳಿಕೆಯ ಮೇರೆಗೆ ನಮ್ಮ ವಕೀಲರು ವಾದ ಪತ್ರವನ್ನು ತಯಾರಿಸಿರುತ್ತಾರೆ. ವಾದ ಪತ್ರದ ಅಂಶಗಳನ್ನು ನಾನು ಓದಿ ತಿಳಿದುಕೊಂಡಿರುತ್ತೇನೆ . ದಾವಾ ಸ್ವತ್ತುಗಳನ್ನು ಹೊರತು ಪಡಿಸಿ ನನ್ನ ತಂದೆ ಮತ್ತು ಚಿಕ್ಕಪ್ಪಂದಿರಿಗೆ ಯಾವುದೇ ಗ್ರಾಮದಲ್ಲಿ ಆಸ್ತಿಗಳು ಇರುವುದಿಲ್ಲ. ನನ್ನ ತಂದೆ ಮತ್ತು ಚಿಕ್ಕಪ್ಪ ದಾವಾ 2 ನೇ ಆಸ್ತಿಯನ್ನು ಮಾರಾಟ ಮಾಡಿರುವ ಕ್ರಯ ಪತ್ರದಲ್ಲಿ ಸಾಲ ಮಾಡಿರುವ ಕಾರಣಕ್ಕಾಗಿ ಮಾರಾಟ ಮಾಡುತ್ತಿದ್ದೇವೆ ಎಂದು ನಮೂದು ಮಾಡಿಸಿರುತ್ತಾರೆ. ಸದರಿ ಕ್ರಯ ಪತ್ರವನ್ನು ನಾನು ಓದಿ ತಿಳಿದುಕೊಂಡಿರುತ್ತೇನೆ.

**4.** ದಾವಾ 1 ಮತ್ತು 2 ನೇ ಆಸ್ತಿಗಳನ್ನು ನನ್ನ ತಂದೆ ಮತ್ತು ಚಿಕ್ಕಪ್ಪಂದಿರು 3 ನೇ ಪ್ರತಿವಾದಿಗೆ ಮಾರಾಟ ಮಾಡಿರುತ್ತಾರೆ ಎಂದರೆ ಸರಿ. ಕ್ರಯ ಪತ್ರದ ಆಧಾರ ಮೇಲೆ ದಾವಾ 1 ಮತ್ತು 2 ನೇ ಆಸ್ತಿಗಳ ಖಾತೆ 3 ನೇ ಪ್ರತಿವಾದಿಯ ಹೆಸರಿಗೆ ವರ್ಗಾವಣೆಯಾಗಿರುತ್ತದೆ ಎಂದರೆ ನನಗೆ ಗೊತ್ತಿರುವುದಿಲ್ಲ. 3 ನೇ ಪ್ರತಿವಾದಿ ದಾವಾ 2 ನೇ ಆಸ್ತಿಯನ್ನು 6 ನೇ ಪ್ರತಿವಾದಿಗೆ ಮಾರಾಟ ಮಾಡಿರುತ್ತಾರೆ ಎಂದರೆ ಸರಿ. ಕ್ರಯ ಪತ್ರದ ಆಧಾರ ಮೇಲೆ ದಾವಾ 2 ನೇ ಆಸ್ತಿಯ ಖಾತೆ

6 ನೇ ಪ್ರತಿವಾದಿಯ ಹೆಸರಿಗೆ ವರ್ಗಾವಣೆಯಾಗಿರುತ್ತದೆ ಎಂದರೆ ನನಗೆ ಗೊತ್ತಿರುವುದಿಲ್ಲ. 6 ನೇ ಪ್ರತಿವಾದಿ ದಾವಾ 2 ನೇ ಆಸ್ತಿಯನ್ನು 7 ನೇ ಪ್ರತಿವಾದಿಗೆ ಮಾರಾಟ ಮಾಡಿರುತ್ತಾರೆ ಎಂದರೆ ಸರಿ. ಕ್ರಯ ಪತ್ರದ ಆಧಾರ ಮೇಲೆ ದಾವಾ 2 ನೇ ಆಸ್ತಿಯ ಖಾತೆ 7 ನೇ ಪ್ರತಿವಾದಿಯ ಹೆಸರಿಗೆ ವರ್ಗಾವಣೆಯಾಗಿರುತ್ತದೆ ಎಂದರೆ ನನಗೆ ಗೊತ್ತಿರುವುದಿಲ್ಲ. 7 ನೇ ಪ್ರತಿವಾದಿ ದಾವಾ 2 ನೇ ಆಸ್ತಿಯನ್ನು 8 ನೇ ಪ್ರತಿವಾದಿಗೆ ಮಾರಾಟ ಮಾಡಿರುತ್ತಾರೆ ಎಂದರೆ ಸರಿ. 8 ನೇ ಪ್ರತಿವಾದಿ ದಾವಾ 2 ನೇ ಆಸ್ತಿಗೆ ಸಂಬಂಧಿಸಿದಂತೆ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ ಸರಿ ಇರುತ್ತದೆ ಎಂದು ದಾವಾ 2 ನೇ ಆಸ್ತಿಯನ್ನು ಖರೀದಿ ಮಾಡಿರುತ್ತಾರೆ ಎಂದು ಸೂಚಿಸುವುದು ಸರಿಯಲ್ಲ. ಕ್ರಯ ಪತ್ರದ ಆಧಾರ ಮೇಲೆ ದಾವಾ 2 ನೇ ಆಸ್ತಿಯ ಖಾತೆ 8 ನೇ ಪ್ರತಿವಾದಿಯ ಹೆಸರಿಗೆ ವರ್ಗಾವಣೆಯಾಗಿರುತ್ತದೆ ಎಂದರೆ ಸರಿ. ದಾವಾ 2 ನೇ ಆಸ್ತಿಯನ್ನು 8 ನೇ ಪ್ರತಿವಾದಿ ಸ್ವಾಧೀನದಲ್ಲಿರುತ್ತಾರೆ ಎಂದು ಸೂಚಿಸುವುದು ಸರಿಯಲ್ಲ.

**5.** ದಾವಾ 2 ನೇ ಆಸ್ತಿಯ ಖಾತೆ 3 ನೇ ಪ್ರತಿವಾದಿ , 6 ನೇ ಪ್ರತಿವಾದಿ, 7 ಮತ್ತು 8 ನೇ ಪ್ರತಿವಾದಿಗಳ ಹೆಸರಿಗೆ ಕಾನೂನು ಬಾಹಿರವಾಗಿ ವರ್ಗಾವಣೆಯಾಗಿರುತ್ತದೆ ಎಂದು ಉಪ ವಿಭಾಗಾಧಿಕಾರಿಗಳ ಮುಂದೆ ಮೇಲ್ಮನವಿ ಸಲ್ಲಿಸಿರುವುದಿಲ್ಲ. ನನ್ನ ತಂದೆ ಹಾಗೂ ಚಿಕ್ಕಪ್ಪಂದಿರು ದಾವಾ 2 ನೇ ಆಸ್ತಿಯನ್ನು 3 ನೇ ಪ್ರತಿವಾದಿಗೆ ಮಾರಾಟ ಮಾಡಿದ ನಂತರ ದಾವಾ 2 ನೇ ಆಸ್ತಿಯ 3 ನೇ ಪ್ರತಿವಾದಿಯ ಸ್ವಾಧೀನದಲ್ಲಿತ್ತು ಎಂದು ಸೂಚಿಸಿದ್ದಕ್ಕೆ ಸಾಕ್ಷಿಯು ನನಗೆ ಗೊತ್ತಿರುವುದಿಲ್ಲ ಎಂದು ಉತ್ತರಿಸಿರುತ್ತಾರೆ. 3 ನೇ ಪ್ರತಿವಾದಿ ದಾವಾ 2 ನೇ ಸ್ವತ್ತಿನ ಸ್ವಾಧೀನವನ್ನು 6 ನೇ ಪ್ರತಿವಾದಿಗೆ ವಹಿಸಿಕೊಟ್ಟಿರುತ್ತಾರೆ ಎಂದರೆ ಸರಿ. 6 ನೇ ಪ್ರತಿವಾದಿ ದಾವಾ 2 ನೇ ಸ್ವತ್ತಿನ ಸ್ವಾಧೀನವನ್ನು 7 ನೇ ಪ್ರತಿವಾದಿಗೆ ವಹಿಸಿಕೊಟ್ಟಿರುತ್ತಾರೆ ಎಂದರೆ ಸರಿ. 7 ನೇ

ಪ್ರತಿವಾದಿ ದಾವಾ 2 ನೇ ಸ್ವತ್ತಿನ ಸ್ವಾಧೀನವನ್ನು 8 ನೇ ಪ್ರತಿವಾದಿಗೆ ವಹಿಸಿಕೊಟ್ಟಿರುತ್ತಾರೆ ಎಂದರೆ ಸರಿ. 8 ನೇ ಪ್ರತಿವಾದಿ ದಾವಾ 2 ನೇ ಸ್ವತ್ತನ್ನು ಸಾಗುವಳಿ ಮಾಡುತ್ತಿರುತ್ತಾರೆ ಎಂದರೆ ಸರಿ.

**6.** ನನ್ನ ತಂದೆ ಹಾಗೂ ಚಿಕ್ಕಪ್ಪಂದಿರು ದಾವಾ 2 ನೇ ಆಸ್ತಿಯನ್ನು ನಮ್ಮ ಕುಟುಂಬದ ಅವಶ್ಯಕತೆಗಳಿಗಾಗಿ, ಹಿಂದೆ ನನ್ನ ತಾತ ಮಾಡಿದ್ದಂತಹ ಸಾಲವನ್ನು ಮರು ಪಾವತಿಸಲು ಮತ್ತು ಬೇರೆ ಕಡೆ ಜಮೀನನ್ನು ಖರೀದಿ ಮಾಡಲು 3 ನೇ ಪ್ರತಿವಾದಿಗೆ ಮಾರಾಟ ಮಾಡಿರುತ್ತಾರೆ ಎಂದು ಸೂಚಿಸುವುದು ಸರಿಯಲ್ಲ. ನಮ್ಮ ಕುಟುಂಬದ ಅವಶ್ಯಕತೆಗಳಿಗಾಗಿ ದಾವಾ 2 ನೇ ಆಸ್ತಿಯನ್ನು ಕಾನೂನುಬದ್ಧವಾಗಿ ಮಾರಾಟ ಮಾಡಿರುವುದರಿಂದ ನನಗೆ ಮತ್ತು 1 ನೇ ವಾದಿಗೆ ದಾವಾ 2 ನೇ ಆಸ್ತಿಯಲ್ಲಿ ಯಾವುದೇ ಹಕ್ಕು ಇರುವುದಿಲ್ಲ ಎಂದು ಸೂಚಿಸುವುದು ಸರಿಯಲ್ಲ. ದಾವಾ 1 ಮತ್ತು 2 ನೇ ಆಸ್ತಿಗಳನ್ನು ಮಾರಾಟ ಮಾಡಿರುವ ವಿಚಾರ 2011 ರಲ್ಲಿ ನನಗೆ ಗೊತ್ತಾಗಿರುತ್ತದೆ.

(ಈ ಹಂತದಲ್ಲಿ 8 ನೇ ಪ್ರತಿವಾದಿ ಪರ ವಕೀಲರ ಕೋರಿಕೆಯ ಮೇರೆಗೆ ಪಾಟೀಸವಾಲನ್ನು ಮುಂದೂಡಲಾಯಿತು.)

(ತೆರೆದ ನ್ಯಾಯಾಲಯಾದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀರಣಗೊಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ. ಹೇ. ಕೇ. ಸರಿ. ಇದೆ.

ಸಹಿ/-

(ಶ್ರೀ ಅಮರನಾಥ ಬಿ.ಎನ್)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಮಧುಗಿರಿ